ಶಾಸನ ರಚನಾ ಕಾರ್ಯಕಲಾಪಗಳು

ಅಧ್ಯಕ್ಷರು —೧೯೮೮ನೇ ಇಸವಿಯ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಮಂಡಿಸಲು ಅನುಮತಿ ಕೋರುವುದು.

೧೯೮೮ರ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) —ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೮ರ ಕರ್ನಾಟಕ ಕೃಷಿ ಪರಮಾನ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು —ಪ್ರಸ್ತಾವ ಏನೆಂದರೆ ''೧೯೮೮ರ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ ೧೯೮೮ರ ಕರ್ನಾಟಕ ಕೃಷಿ ಪರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ *

೧೯೮೮ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೮ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು — ಪ್ರಸ್ತಾವ ಏನೆಂದರೆ ೧೯೮೮ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ೧೯೮೮ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.—*

೧೯೮೮ರ ಕರ್ನಾಟಕ ಮನರಂಜನಾ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ೧೯೮೮ರ ಕರ್ನಾಟಕ ಮನರಂಜನಾ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

---

* Annexure

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ ''೧೯೮೮ರ ಕರ್ನಾಟಕ ಮನರಂಜನಾ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ೧೯೮೮ರ ಕರ್ನಾಟಕ ಮನರಂಜನಾ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ *

೧೯೮೮ರ ಕರ್ನಾಟಕ ಕೃಷಿ ವರಮಾನ ತೆರಿಗೆ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ''೧೯೮೮ರ ಕರ್ನಾಟಕ ಕೃಷಿ ವರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.''

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್.—ಇದರಲ್ಲಿ ವರ್ಷದ ಬದಲಾವಣೆ ಆಗಬೇಕೆಂಬ ಸೂಚನೆ ಮುಖ್ಯವಾದದ್ದು. ಇದನ್ನು ಮಾನ್ಯ ಮುಖ್ಯ ಮಂತ್ರಿಯವರು ತಮ್ಮ ಆಯವ್ಯಯವನ್ನು ಸಭೆಯ ಮುಂದೆ ಮಂಡಿಸುವಾಗ ಪ್ರಸ್ತಾಪ ಮಾಡಿದ್ದಾರೆ. ಆದ್ದರಿಂದ ಇದರಲ್ಲಿ ಹೊಸ ವಿಚಾರವೇನೂ ಇಲ್ಲ ಈ ಒಂದು ತಿದ್ದುಪಡಿ ಮುಂದಿನ ವರ್ಷ ಅಂದರೆ ೧೯೮೯ನೇ ಇಸವಿಯಿಂದ ಜಾರಿಗೆ ಬರುತ್ತದೆ. ಏಪ್ರಿಲ್ ಒಂದರಿಂದ ವಿತ್ತೀಯ ವರ್ಷ ಪ್ರಾರಂಭವಾಗಬೇಕೆಂಬುದೇ ಇದರಲ್ಲಿ ಸೂಚಿಸಿರತಕ್ಕ ಬದಲಾವಣೆ. ಇದಕ್ಕೆ ಸಭೆ ಒಪ್ಪಿಗೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ ೧೯೮೮ರ ಕರ್ನಾಟಕ ಕೃಷಿ ವರಮಾನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

೨ನೇ ಖಂಡ

ಅಧ್ಯಕ್ಷರು.—ಖಂಡ ೨ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ಮೊದಲನೇ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಭಾಗವಾಗಿರುತ್ತವೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು

---

* ANNEXURE